**ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಕಾವೇರಿ ಭವನ, 6ನೇ ಮಹಡಿ, ಕೆ.ಜಿ.ರಸ್ತೆ, ಬೆಂಗಳೂರು– 560 009.**

# ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳ ಮೌಖಿಕ ಪರೀಕ್ಷೆ (VIVA-VOCE) ಪ್ರಕಟಣೆ ದಿನಾಂಕ: 21.10.2022

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳಿಗೆ ಸಂಬಂಧಿಸಿದಂತೆ ನಡೆಸಲಾಗಿದ್ದ ಮುಖ್ಯ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಅಧಿಸೂಚನೆ ಸಂಖ್ಯೆ: ಡಿಪಿಎನ್/ನೇ.ಸ./09/2019–2020, ದಿನಾಂಕ: 15.10.2022 ರನ್ವಯ ಮೌಖಿಕ ಪರೀಕ್ಷೆ/ಸಂದರ್ಶನಕ್ಕೆ ಅರ್ಹರಾಗಿರುವ ಮತ್ತು ಸದರಿ ಅಧಿಸೂಚನೆಯಲ್ಲಿ ಕಾಣಿಸಲಾಗಿರುವ 161 ಅರ್ಹ ಅಭ್ಯರ್ಥಿಗಳಿಗೆ ದಿನಾಂಕ: 02–11–2022 ರಿಂದ ದಿನಾಂಕ: 05–11–2022 ಮತ್ತು ದಿನಾಂಕ: 07–11–2022 ರಿಂದ 10–11–2022ರ ವರೆಗಿನ ಅವಧಿಯಲ್ಲಿ ಬೆಂಗಳೂರಿನಲ್ಲಿ ಮೌಖಿಕ ಪರೀಕ್ಷೆ (Viva-Voce) ಆಯೋಜಿಸಲಾಗಿದ್ದು, ಅರ್ಹ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗಬೇಕಾಗಿರುವ ದಿನಾಂಕ, ಸ್ಥಳ ಮತ್ತು ಸಮಯವನ್ನು ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ಸದರಿ ಅಭ್ಯರ್ಥಿಗಳು ತಮ್ಮ ಅರ್ಜಿಯಲ್ಲಿ ಕಾಣಿಸಿರುವ ವಿಳಾಸಕ್ಕೆ ಅಂಚೆ ಮುಖಾಂತರ ಶೀಘ್ರದಲ್ಲೇ ಕಳುಹಿಸಲಾಗುವ ಪತ್ರದಲ್ಲಿ ಸ್ಪಷ್ಟವಾಗಿ ತಿಳಿಸಲಾಗುವುದು.

ಮೌಖಿಕ ಪರೀಕ್ಷೆಗೆ ನಿಗದಿಪಡಿಸಲಾಗಿರುವ ದಿನಾಂಕಗಳನ್ನು ಅನಿವಾರ್ಯ ಆಡಳಿತಾತ್ಮಕ ಕಾರಣಗಳಿಗಾಗಿ ಮಾರ್ಪಡಿಸುವ ಮತ್ತು ಮುಂದೂಡುವ ಸಂಪೂರ್ಣ ಅಧಿಕಾರವನ್ನು ಆಯ್ಕೆ ಸಮಿತಿಯು ಹೊಂದಿರುತ್ತದೆ.

ಮೌಖಿಕ ಪರೀಕ್ಷೆಗೆ ಅರ್ಹತೆ ಪಡೆದಿರುವ ಅರ್ಹ ಅಭ್ಯರ್ಥಿಗಳು ತಮಗೆ ನಿಗದಿ ಪಡಿಸಲಾದ ದಿನಾಂಕದಂದು ಸಂದರ್ಶನಕ್ಕೆ ನಿಗದಿಪಡಿಸಲಾದ ಸ್ಥಳದಲ್ಲಿ ಸಮಯಕ್ಕೆ ಸರಿಯಾಗಿ ತಮ್ಮ ಸ್ವಂತ ವೆಚ್ಚದಲ್ಲಿ ಹಾಜರಾಗತಕ್ಕದ್ದು.

ಅರ್ಹ ಅಭ್ಯರ್ಥಿಗಳು ಸಂದರ್ಶನಕ್ಕೆ ನಿಗದಿಪಡಿಸಲಾದ ದಿನಾಂಕದಂದು ಆಯ್ಕೆ ಸಮಿತಿಯ ಮುಂದೆ ಹಾಜರಾಗುವ ಸಂದರ್ಭದಲ್ಲಿ ಕಡ್ಡಾಯವಾಗಿ ಈ ಕೆಳಕಂಡ ಮೂಲ ದಾಖಲೆಗಳು ಮತ್ತು ಆ ಮೂಲ ದಾಖಲೆಗಳ ಸ್ವಯಂ ದೃಢೀಕೃತ ದಾಖಲೆಗಳ ದ್ವಿಪ್ರತಿಗಳನ್ನು ಮತ್ತು ಮೌಖಿಕ ಪರೀಕ್ಷೆಗೆ ಅಭ್ಯರ್ಥಿಯನ್ನು ಆಹ್ವಾನಿಸಿ ಕಳುಹಿಸಿರುವ ಮೂಲ ಪತ್ರವನ್ನು ಪರಿಶೀಲನೆಗಾಗಿ ಆಯ್ಕೆ ಸಮಿತಿ ಅಥವಾ ಆಯ್ಕೆ ಸಮಿತಿಯಿಂದ ನಿಯೋಜಿಸಲ್ಪಟ್ಟ ಅಧಿಕಾರಿಗಳ ಮುಂದೆ ತಪ್ಪದೇ ಹಾಜರು ಪಡಿಸತಕ್ಕದ್ದು.

## ದಾಖಲೆಗಳ ವಿವರ

1. ಅಭ್ಯರ್ಥಿಯ ವಿಳಾಸ ರುಜುವಾತುಪಡಿಸುವಂತಹ ಗುರುತಿನ ಚೀಟಿ/ದಾಖಲೆ.
2. ಅಭ್ಯರ್ಥಿಯ ಜನ್ಮ ದಿನಾಂಕ ರುಜುವಾತುಪಡಿಸಬಹುದಾದ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ.
3. ಅಭ್ಯರ್ಥಿಯ ಪ್ರತಿ ವರ್ಷದ ಕಾನೂನು ಪದವಿಯ ಅಂಕಪಟ್ಟಿಗಳು.
4. ಅಭ್ಯರ್ಥಿಯು ವಕೀಲಿ ವೃತ್ತಿ ನಡೆಸುವ ಬಗ್ಗೆ ಸನ್ನದು (ವಕೀಲರ ಪರಿಷತ್ತಿನಿಂದ ಪಡೆದ ನೊಂದಣಿ ಪ್ರಮಾಣ ಪತ್ರ).
5. ಅಭ್ಯರ್ಥಿಯು ವಕೀಲಿ ವೃತ್ತಿ ನಡೆಸುತ್ತಿರುವ ಬಗ್ಗೆ ಸಂಬಂಧಪಟ್ಟ ನ್ಯಾಯಾಲಯಗಳ ಮಾನ್ಯ ಪೀಠಾಧಿಕಾರಿಯವರಿಂದ ಪಡೆದಿರುವ ಪ್ರಮಾಣ ಪತ್ರ.

6. ಅಭ್ಯರ್ಥಿಯು ಗ್ರಾಮೀಣ ಅಭ್ಯರ್ಥಿಯಾಗಿದ್ದಲ್ಲಿ 1 ರಿಂದ 10ನೇ ತರಗತಿಯವರೆಗೆ ಅಭ್ಯಸಿಸಿದ ಬಗ್ಗೆ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದ ಪ್ರಮಾಣ ಪತ್ರ. ಈ ಪ್ರಮಾಣ ಪತ್ರಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲು ಸಹಿ, ಮೊಹರು ಇರಬೇಕು. ಸಾಮಾನ್ಯ ವರ್ಗಕ್ಕೆ (ಗ್ರಾಮೀಣ) ಸೇರಿದವರು ನಮೂನೆ-1ನ್ನು ಹೆಚ್ಚುವರಿಯಾಗಿ ಪಡೆದು ಪರಿಶೀಲನೆ ಸಂದರ್ಭದಲ್ಲಿ ಹಾಜರುಪಡಿಸಬೇಕು.
7. ಕನ್ನಡ ಮಾಧ್ಯಮ ಅಭ್ಯರ್ಥಿಯಾಗಿದ್ದಲ್ಲಿ 1 ರಿಂದ 10ನೇ ತರಗತಿಯವರೆಗೆ ಅಭ್ಯಸಿಸಿದ ಬಗ್ಗೆ ಶಾಲೆ ಮುಖ್ಯೋಪಾಧ್ಯಾಯರಿಂದ ಪಡೆದ ಪ್ರಮಾಣ ಪತ್ರ.
8. ಮಾಜಿ ಸೈನಿಕರಾಗಿದ್ದಲ್ಲಿ ಸೈನಿಕ ಸೇವೆಯಿಂದ ಬಿಡುಗಡೆ ಹೊಂದಿದ ಅಥವಾ ಸೇವೆ ಮುಕ್ತಾಯಗೊಳಿಸಿದ ಬಗೆಗಿನ ಪ್ರಮಾಣ ಪತ್ರ.
9. ಜಾತಿ ಮತ್ತು ಆದಾಯದನ್ವಯ, ವಿಶೇಷ ವಿಕಲಚೇತನ ವರ್ಗ ಹಾಗೂ ಮಾಜಿ ಸೈನಿಕ ವರ್ಗದಡಿ ಮೀಸಲಾತಿ ಸೌಲಭ್ಯವನ್ನು ಕೋರಿ ಅರ್ಜಿ ಸಲ್ಲಿಸಿ, ಪ್ರಸ್ತುತ ಮೌಖಿಕ ಪರೀಕ್ಷೆಗೆ ಅರ್ಹಗೊಂಡಿರುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರಗಳು.
10. ಹೈದರಾಬಾದ್-ಕರ್ನಾಟಕ ಮೀಸಲಾತಿ ಸೌಲಭ್ಯವನ್ನು ಕೋರಿ ಅರ್ಜಿ ಸಲ್ಲಿಸಿ, ಪ್ರಸ್ತುತ ಮೌಖಿಕ ಪರೀಕ್ಷೆಗೆ ಅರ್ಹಗೊಂಡಿರುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರಗಳು.

21/10/2020

**(ಹೆಚ್.ಕೆ.ಜಗದೀಶ್)**
ನಿರ್ದೇಶಕರು(ಪ್ರ)
ಹಾಗೂ ನೇಮಕಾತಿ ಸಮಿತಿ ಸದಸ್ಯ ಕಾರ್ಯದರ್ಶಿಗಳು,
ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, ಬೆಂಗಳೂರು